# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ.1045/2020

ಸಾಕ್ಷಿದಾರರ ಹೇಳಿಕೆಃ

| | | |
|---|---|---|
| **ಹೆಸರು** | : | ಸಂತೋಷ್ ಕುಮಾರ್ ಚಾಸಾಃ **6** ಪ್ರಾಸಾಃ **4** |
| **ತಂದೆಯ ಹೆಸರು** | : | ಹನುಮಂತಪ್ಪ |
| **ವಯಸ್ಸು** | : | 35 ವರ್ಷ |
| **ವೃತ್ತಿ** | : | ವ್ಯವಸಾಯ |
| **ವಾಸಸ್ಥಳ** | : | ಹಿರೇಹಾಲಿವಾಣ |

ದಿನಾಂಕಃ **24-01-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದ:-

ಚಾಸಾ-5 ಗೊತ್ತಿಲ್ಲ. 4 ನೇ ಆರೋಪಿ ಗೊತ್ತು. ಈಗೇ ಸುಮಾರು 5 ವರ್ಷಗಳ ಹಿಂದೆ ಪೊಲೀಸರ ಕೋರಿಕೆಯ ಮೇರೆಗೆ 5 ದಾಖಲೆಗಳಿಗೆ ಸಹಿಯನ್ನು ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಜರುಗಿಸಿ, ಕಚ್ಚ ನಕಾಶೆಯನ್ನು ತಯಾರಿಸಿ ಯಾವುದೇ ವಾಹನವನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಸಾಕ್ಷಿಯು 9 ಛಾಯಾಚಿತ್ರಗಳಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಆದರೆ ಯಾವ ವಿಚಾರಕ್ಕೆ ತೆಗೆದಿದ್ದಾರೆ ಎಂಬ ವಿಚಾರ ನನಗೆ ಗೊತ್ತಿಲ್ಲ. ಈ ಬಗ್ಗೆ ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

ಸ್ಥಳ ಮಹಜರ್ ಸಮಯದಲ್ಲಿ ನೀಡಿದ ನೋಟೀಸನ್ನು ನಿಪಿ-7 ಎಂದು, ಸಾಕ್ಷಿಯ ಸಹಿಯನ್ನು ನಿಪಿ-7(ಎ) ಎಂದು, ಸ್ಥಳ ಮಹಜರ್ ಅನ್ನು ನಿಪಿ-8 ಎಂದು, ಸಾಕ್ಷಿಯ ಸಹಿಯನ್ನು ನಿಪಿ-8(ಎ) ಎಂದು,

ಕಚ್ಚ ನಕಾಶೆಯನ್ನು ನಿಪಿ-9 ಎಂದು, ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು, ಸ್ಥಳ ಮಹಜರ್ ಸಮಯದಲ್ಲಿ ತೆಗೆದ 3 ಛಾಯಾಚಿತ್ರಗಳನ್ನು ನಿಪಿ-10 ರಿಂದ 12 ಎಂದು, ಅಮಾನತ್ತು ಮಹಜರ್ ಸಮಯದಲ್ಲಿ ನೀಡಿದ ನೋಟೀಸನ್ನು ನಿಪಿ-13 ಎಂದು, ಸಾಕ್ಷಿಯ ಸಹಿಯನ್ನು ನಿಪಿ-13(ಎ) ಎಂದು, ಅಮಾನತ್ತು ಮಹಜರ್ ಅನ್ನು ನಿಪಿ-14 ಎಂದು, ಸಾಕ್ಷಿಯ ಸಹಿಯನ್ನು ನಿಪಿ-14(ಎ) ಎಂದು, 6 ಛಾಯಾಚಿತ್ರಗಳನ್ನು ನಿಪಿ-15 ರಿಂದ 20 ಎಂದು, ಸಿ ಡಿ ಯನ್ನು ನಿಪಿ-21 ಎಂದು ಗುರುತಿಸಲಾಯಿತು.

ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.

<u>ಪಾಟೀ ಸವಾಲು :- ಮಾನ್ಯ ಸ.ಸ.ಅ. ರವರಿಂದ:-</u>

ದಿಃ 02-03-2020 ರಂದು ಪೊಲೀಸರಿಂದ ನಿಪಿ-7 ರಂತೆ ನೋಟೀಸನ್ನು ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಅದೇ ದಿನ ಪೊಲೀಸರು 4 ನೇ ಆರೋಪಿ ಸ್ಥಳ ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ-5 ರವರ ಸಮಕ್ಷಮ ಮದಾಹ್ನ 02-00 ರಿಂದ 03-00 ಗಂಟೆ ಸಮಯದಲ್ಲಿ ನಿಪಿ-8 ರಂತೆ ಸ್ಥಳ ಮಹಜರ್ ಕ್ರಮ ಜರುಗಿಸಿ, ನಿಪಿ-9 ರಂತೆ ಕಚ್ಚ ನಕಾಶೆಯನ್ನು ತಯಾರಿಸಿ, ನಿಪಿ-10 ರಿಂದ 12 ಛಾಯಾಚಿತ್ರಗಳನ್ನು ತೆಗೆದಿದ್ದಾರೆ ಎಂದರೆ ಸರಿಯಲ್ಲ.

ಅದೇ ದಿನ ಪೊಲೀಸರಿಂದ ನಿಪಿ-13 ರಂತೆ ನೋಟೀಸನ್ನು ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಹೊನ್ನಾಳಿ ಪೊಲೀಸ್ ಠಾಣೆಯ ವಸತಿ ಗೃಹದಲ್ಲಿ ನನ್ನ, ಚಾಸಾ-5 ಮತ್ತು 4 ನೇ ಆರೋಪಿಯ ಸಮಕ್ಷಮದಲ್ಲಿ ಕೆಎ-27/ಯು-7224 ಮೋಟಾರ್ ಸೈಕಲ್ ಮತ್ತು ಟ್ರಾಕ್ಟರ್ ನಂ.ಕೆಎ-17/ಟಿಬಿ-9599 ಟ್ರಾಕ್ಟರ್ ಇಂಜಿನ್ ಅನ್ನು ಅಮಾನತ್ತು ಪಡಿಸಿಕೊಂಡು ಮದ್ಯಾಹ್ನ 03-30 ರಿಂದ 04-00 ಗಂಟೆ ಸಮಯದಲ್ಲಿ ನಿಪಿ-14 ರಂತೆ ಅಮಾನತ್ತು ಮಹಜರ್ ಕ್ರಮ ಜರುಗಿಸಿ ನಿಪಿ-15 ಮತ್ತು 20 ರಂತೆ ಛಾಯಾಚಿತ್ರಗಳನ್ನು ತೆಗೆದಿದ್ದಾರೆ ಎಂದರೆ ಸರಿಯಲ್ಲ. ಈ ಬಗ್ಗೆ ಪೊಲೀಸರಿಗೆ ನಿಪಿ-22 ರಂತೆ ಹೇಳಿಕೆಯನ್ನು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು :- ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.